ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE 13/10/2020

## ಹೈಕೋರ್ಟ್‌ಗೆ ಚುನಾವಣಾ ಆಯೋಗದ ಮಾಹಿತಿ ಪಿಐಎಲ್ ವಿಚಾರಣೆ

# ಪಾಲಿಕೆ ಚುನಾವಣೆ ವಿಳಂಬ ಸಾಧ್ಯತೆ

13-10-2020

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆ ಹೆಚ್ಚಳ ಹಾಗೂ ವಾರ್ಡ್ ಮರುವಿಂಗಡಣೆ ಅಧ್ಯಯನಕ್ಕೆ ಆಯೋಗ ರಚನೆ ಮಾಡಿರುವುದು ಪಾಲಿಕೆ ಚುನಾವಣೆ ವಿಳಂಬಕ್ಕೆ ಕಾರಣವಾಗಬಹುದು ಎಂದು ರಾಜ್ಯ ಚುನಾವಣಾ ಆಯೋಗ ಹೈಕೋರ್ಟ್‌ಗೆ ತಿಳಿಸಿದೆ.

ಪಾಲಿಕೆಗೆ ಶೀಘ್ರ ಚುನಾವಣೆ ನಡೆಸುವ ವಿಚಾರವಾಗಿ ರಾಜ್ಯ ಚುನಾವಣಾ ಆಯೋಗ, ಮಾಜಿ ಕಾರ್ಪೊರೇಟರ್ ಎಂ. ಶಿವರಾಜ್ ಮತ್ತಿತರರು ಸಲ್ಲಿಸಿರುವ ಪ್ರತ್ಯೇಕ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಸೋಮವಾರ ವಿಚಾರಣೆ ನಡೆಸಿತು.

**» ವಾರ್ಡ್ ಸಂಖ್ಯೆ ಹೆಚ್ಚಳ ಅಧ್ಯಯನಕ್ಕೆ ಕಮಿಷನ್ ರಚನೆ ಹಿನ್ನೆಲೆ**

ರಾಜ್ಯ ಅಡ್ವೋಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ಹಾಜರಾಗಿ, ಕೆಎಂಸಿ ಕಾಯ್ದೆ-1976ಕ್ಕೆ ತಿದ್ದುಪಡಿ ತಂದು ಬಿಬಿಎಂಪಿಯಲ್ಲಿದ್ದ 198 ವಾರ್ಡ್‌ಗಳನ್ನು 225ರಿಂದ ಗರಿಷ್ಠ 250 ಮೀರದಂತೆ ರಚಿಸಲು ಸುಗ್ರೀವಾಜ್ಞೆ ಹೊರಡಿಸಲಾಗಿದೆ. ವಾರ್ಡ್ ಮರುವಿಂಗಡಣೆ ಬಗ್ಗೆ ಅಧ್ಯಯನ ನಡೆಸಲು ಆಯೋಗ ನೇಮಕ ಮಾಡಲಾಗಿದೆ. ವಿಧಾನಸಭೆ ಉಪಚುನಾವಣೆ ಮತ್ತು ಬೆಂಗಳೂರು ಶಿಕ್ಷಕರ ಕ್ಷೇತ್ರ ಚುನಾವಣೆ ಘೋಷಣೆಯಾಗಿ, ನೀತಿಸಂಹಿತೆ ಜಾರಿಯಲ್ಲಿರುವ ಕಾರಣ ಈ ಬಗ್ಗೆ ಅಧಿಸೂಚನೆ ಹೊರಡಿಸಲು ಸಾಧ್ಯವಾಗಿಲ್ಲ. ಅದಕ್ಕಾಗಿ ಅನುಮತಿ ಕೋರಿ ಕೇಂದ್ರ ಚುನಾವಣಾ ಆಯೋಗಕ್ಕೆ ಪತ್ರ ಬರೆಯಲಾಗಿದೆ ಎಂದು ನ್ಯಾಯಪೀಠಕ್ಕೆ ವಿವರಿಸಿದರು.

ರಾಜ್ಯ ಚುನಾವಣಾ ಆಯೋಗದ ಪರ ವಕೀಲರು

[redacted] [redacted]



ವಾದ ಮಂಡಿಸಿ, ಈಗಾಗಲೇ ಪಾಲಿಕೆಯ 198 ವಾರ್ಡ್‌ಗಳ ಮೀಸಲು ಪಟ್ಟಿ ಮತ್ತು ಮತದಾರರ ಪಟ್ಟಿ ಸಿದ್ಧಪಡಿಸಲಾಗಿದ್ದು, ಬಹುತೇಕ ಚುನಾವಣೆ ಕಾರ್ಯ ಪೂರ್ಣಗೊಳಿಸಲಾಗಿದೆ. ಈ ಹಂತದಲ್ಲಿ ವಾರ್ಡ್‌ಗಳ ಸಂಖ್ಯೆ ಹೆಚ್ಚಳ ಮಾಡಿ, ವಾರ್ಡ್ ಮರು ವಿಂಗಡಣೆಯ ಅಧ್ಯಯನಕ್ಕೆ ಆಯೋಗ ರಚಿಸಲಾಗಿದೆ ಎಂದು ಸರ್ಕಾರ ಹೇಳುತ್ತಿದೆ. ಇದರಿಂದ, ಚುನಾವಣಾ ಆಯೋಗ ಈವರೆಗೆ ನಡೆಸಿದ ಎಲ್ಲ ಕೆಲಸಗಳು ವ್ಯರ್ಥವಾದಂತಾಗುತ್ತದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು.

ಪಾಲಿಕೆಯ ಚುನಾಯಿತ ಸದಸ್ಯರ ಅವಧಿ ಪೂರ್ಣಗೊಂಡಿದ್ದು, ಆಡಳಿತಾಧಿಕಾರಿ ನೇಮಕ ಮಾಡಲಾಗಿದೆ. ವಾರ್ಡ್ ಮರು ವಿಂಗಡಣೆ ಅಧ್ಯಯನಕ್ಕೆ ನೇಮಿಸಿರುವ ಆಯೋಗಕ್ಕೆ 6 ತಿಂಗಳ ಕಾಲಾವಕಾಶ ನೀಡಲಾಗಿದೆ. 6 ತಿಂಗಳ ನಂತರ ಆಯೋಗದ ವರದಿ ಆಧರಿಸಿ ಮತ್ತೆ ಮೀಸಲು ಹಾಗೂ ಮತದಾರರ ಪಟ್ಟಿ ಸಿದ್ಧಪಡಿಸಬೇಕು. ಅದು ಪೂರ್ಣಗೊಳ್ಳಲು 1 ವರ್ಷ ಹಿಡಿಯಬಹುದು ಎಂದು ಕೋರ್ಟ್ ಗಮನಕ್ಕೆ ತಂದರು. ಅದಕ್ಕೆ ನ್ಯಾಯಪೀಠ, ಕನಿಷ್ಠ 1 ವರ್ಷ ಬಿಬಿಎಂಪಿಗೆ ಚುನಾವಣೆ ನಡೆಸಬಾರದು ಎಂದು ಸರ್ಕಾರ ಉದ್ದೇಶಿಸಿರುವಂತೆ ಕಾಣುತ್ತಿದೆ ಎಂದು ಮೌಖಿಕವಾಗಿ ನುಡಿಯಿತು.

### ಸುಗ್ರೀವಾಜ್ಞೆ ಪ್ರಶ್ನಿಸಲು ಅವಕಾಶ

**ಬಿಬಿಎಂಪಿಗೆ ಚುನಾಯಿತ ಸದಸ್ಯರ ಆಡಳಿತದ ಬದಲು ಆಡಳಿತಾಧಿಕಾರಿಯ ಆಡಳಿತ ಮುಂದುವರಿಸಬೇಕೆಂಬ ಆಲೋಚನೆ ಸರ್ಕಾರಕ್ಕೆ ಇದ್ದಂತಿದೆ. ಮುಖ್ಯವಾಗಿ 2021 ಜನಗಣತಿ ವರ್ಷವಾಗಿದೆ. ಆ ಪ್ರಕ್ರಿಯೆ ಆರಂಭವಾಗಿ ಜನಗಣತಿ ಪೂರ್ಣಗೊಂಡ ನಂತರ ಯಾರಾದರೂ ಕೋರ್ಟ್ ಮೆಟ್ಟಿಲೇರಿ 2021ರ ಜನಗಣತಿ ಪ್ರಕಾರ ವಾರ್ಡ್ ಮರು ವಿಂಗಡಣೆ ನಡೆಸಬೇಕಿತ್ತು ಎಂದು ಆಕ್ಷೇಪಿಸುವ ಸಾಧ್ಯತೆ ಇದೆ. ಆಗ ಮತ್ತೊಂದು ಸಮಸ್ಯೆ ಎದುರಾಗಲಿದೆ. ಆದ್ದರಿಂದ, ಶೀಘ್ರ ಚುನಾವಣೆ ನಡೆಸಲು ಸರ್ಕಾರಕ್ಕೆ ನ್ಯಾಯಾಲಯವೇ ಆದೇಶಿಸಬೇಕು ಎಂದು ಎಂದು ಮತ್ತೊಬ್ಬ ಅರ್ಜಿದಾರರ ಪರ ವಕೀಲರು ಕೋರಿದರು. ಅಡ್ವೋಕೇಟ್ ಜನರಲ್ ಪ್ರತಿಕ್ರಿಯಿಸಿ, ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸಬೇಕೆಂಬ ಆಲೋಚನೆ ಸರ್ಕಾರಕ್ಕೂ ಇದೆ. ಆದರೆ, ವಾರ್ಡ್ ಮರು ವಿಂಗಡಣೆ ಮಾಡಲೇ ಬೇಕಿರುವ ಕಾರಣ ಆ ಪ್ರಕ್ರಿಯೆಗೆ ಸರ್ಕಾರ ಚಾಲನೆ ನೀಡಿದೆ ಎಂದರು. ಅಂತಿಮವಾಗಿ ವಾರ್ಡ್‌ಗಳ ಸಂಖ್ಯೆ ಹೆಚ್ಚಳ ಮಾಡಿ ಸರ್ಕಾರ ಹೊರಡಿಸಿರುವ ಸುಗ್ರೀವಾಜ್ಞೆ ಪ್ರಶ್ನಿಸಿ ತಿದ್ದುಪಡಿ ಅರ್ಜಿ ಸಲ್ಲಿಸಲು ಅವಕಾಶ ನೀಡಬೇಕೆಂದು ಅರ್ಜಿದಾರರು ಮನವಿ ಮಾಡಿದ ಹಿನ್ನೆಲೆಯಲ್ಲಿ, ಅದನ್ನು ಪುರಸ್ಕರಿಸಿದ ಪೀಠ ಅರ್ಜಿ ವಿಚಾರಣೆಯನ್ನು ಅ.20ಕ್ಕೆ ಮುಂದೂಡಿತು.**